**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ/ಅಧಿಸೂಚನೆ/2021/48/2020-21 ದಿನಾಂಕ: 03.03.2021

**:: ಸುತ್ತೋಲೆ ::**

ವಿಷಯ:- 2021ನೇ ಜೂನ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ರಾಜ್ಯದ ಶಾಲಾ/ ಕಾಲೇಜುಗಳಿಂದ ಹಾಜರಾಗುವ ವಿದ್ಯಾರ್ಥಿಗಳನ್ನು ನೋಂದಾಯಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:- 1. ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ/ಅಧಿಸೂಚನೆ/2021/48/ 2020-21 ದಿನಾಂಕ: 19.01.2021.

2. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ:15.02.2021 ಮತ್ತು 23.02.2021.

* * * * *

2021ನೇ ಜೂನ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳಿಂದ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳು, ಖಾಸಗಿ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳ ಮಾಹಿತಿಯನ್ನು ಆನ್‌ಲೈನ್ ಮುಖಾಂತರ ನೋಂದಾಯಿಸಲು ಹಾಗೂ ಶುಲ್ಕ ಪಾವತಿಸಲು ಉಲ್ಲೇಖಿತ-2ರ ಸುತ್ತೋಲೆಗಳಲ್ಲಿ ದಿನಾಂಕವನ್ನು ವಿಸ್ತರಿಸಿ ಸುತ್ತೋಲೆ ಹೊರಡಿಸಲಾಗಿರುತ್ತದೆ.

ಆದರೆ ರಾಜ್ಯದ ಕೆಲವು ಶಾಲೆಗಳಿಂದ ಹಾಗೂ ಪೋಷಕರಿಂದ ಮಂಡಳಿಗೆ ದೂರವಾಣಿಯ ಮುಖಾಂತರ ವಿದ್ಯಾರ್ಥಿಗಳ ನೋಂದಣಿ ಮತ್ತು ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ, ವಿದ್ಯಾರ್ಥಿಗಳ ನೋಂದಣಿ, ಪರೀಕ್ಷಾ ಶುಲ್ಕ ಪಾವತಿ ಹಾಗೂ ಪ್ರಸ್ತಾವನೆ ಸಲ್ಲಿಕೆ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ಈಗಾಗಲೇ ನಿಗಧಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 1 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ CCERF, CCEPF CCERR , CCEPR, NSR ಮತ್ತು NSPR ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ <u>ಅಂತಿಮ</u> ದಿನಾಂಕ: | 03.03.2021 | 10.03.2021 |
| 2 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ CCERF, CCEPF, CCERR , CCEPR, NSR ಮತ್ತು NSPR ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ ದಿನಾಂಕ: | 05.03.2021 ರಿಂದ 10.03.2021 | 18.03.2021 ರಿಂದ 23.03.2021 |
| 3 | ಕ್ರಮ ಸಂಖ್ಯೆ-2ರಂತೆ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ ದಿನಾಂಕ | 05.03.2021 ರಿಂದ 10.03.2021 | 18.03.2021 ರಿಂದ 24.03.2021 |
| 4 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ ಪದ್ಧತಿಯಂತೆ ಮಂಡಳಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ <u>ಅಂತಿಮ</u> ದಿನಾಂಕ | 10.03.2021 | 24.03.2021 |

| | | | |
|---|---|---|---|
| 5 | ಕೆಳಕಂಡ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ನಿಗಧಿಪಡಿಸಿದ ಅಂತಿಮ ದಿನಾಂಕ<br>• CCERF, CCEPF, CCERR, CCEPR, NSR & NSPR ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನೊಳಗೊಂಡಂತೆ ಶಾಲಾಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್ ಬಳಸಿಕೊಂಡು ಶುಲ್ಕ ಪಾವತಿಸಿದ ಮೂಲ ಚಲನ್<br>• 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಎಂಎಸ್ಎ ಮತ್ತು ಹಿಂದಿನ ಪದ್ಧತಿಯಂತೆ ಮಂಡಳಿ ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಿದ ಮೂಲ ಚಲನ್<br>• ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ಇತರೆ ದಾಖಲೆಗಳು | 17.03.2021 | 31.03.2021 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕಗಳವರೆಗೆ ವಿದ್ಯಾರ್ಥಿಗಳಿಂದ ಶುಲ್ಕ ಸ್ವೀಕರಿಸಿ, ಆನ್‌ಲೈನ್ ಮುಖಾಂತರ ನೋಂದಣಿ ಮಾಡಬೇಕಾಗಿರುತ್ತದೆ. ಈ ಕುರಿತು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತಂದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

(ವಿ. ಸುಮಂಗಲ)
ನಿರ್ದೇಶಕರು, ಪರೀಕ್ಷೆಗಳು

ಗೆ

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.
6. ಕಛೇರಿ ಪ್ರತಿ.

A8_letter1